(15)

# ಕರ್ನಾಟಕ ವಿಧಾನ ಪರಿಷತ್ತು

1. ಚುಕ್ಕೆ ಗುರುತಿನ ಪ್ರಶ್ನೆ ಸಂಖ್ಯೆ : 908
2. ಸದಸ್ಯರ ಹೆಸರು : ಶ್ರೀ ವಿಜಯ ಸಿಂಗ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ)
3. ಉತ್ತರಿಸಬೇಕಾದ ದಿನಾಂಕ : 29.09.2020
4. ಉತ್ತರಿಸುವ ಸಚಿವರು : ಸಹಕಾರ ಸಚಿವರು

****

| ಕ್ರ.ಸಂ | ಪ್ರಶ್ನೆ | ಉತ್ತರ |
|---|---|---|
| ಅ | ರಾಜ್ಯದಲ್ಲಿ ಮುಂಗಾರಿನ ಮಳೆಯಿಂದ ಹೆಸರು, ಉದ್ದು ಬೆಳೆ ಉತ್ತಮವಾಗಿದ್ದು, ಈ ಬೆಳೆಯನ್ನು ರೈತರಿಂದ ಖರೀದಿಸಲು ಸರ್ಕಾರ ಏನು ಕ್ರಮ ಕೈಗೊಳ್ಳಲಿದೆ; | ದಿನಾಂಕ: 15/09/2020ರ ಆದೇಶಗಳನ್ವಯ, 2020-21ನೇ ಸಾಲಿನ ಮುಂಗಾರು ಹಂಗಾಮಿನಲ್ಲಿ ಕೇಂದ್ರ ಸರ್ಕಾರದ ಬೆಂಬಲ ಬೆಲೆ ಯೋಜನೆಯಡಿಯಲ್ಲಿ ಕೇಂದ್ರ ಸರ್ಕಾರವು ನಿಗದಿಪಡಿಸಿರುವ ಪ್ರತಿ ಕ್ವಿಂಟಾಲ್‌ಗೆ ರೂ. 7,196/- ರಂತೆ ಗರಿಷ್ಠ 21,725 ಮೆಟ್ರಿಕ್ ಟನ್ ಎಫ್.ಎ.ಕ್ಯೂ ಗುಣಮಟ್ಟದ ಹೆಸರುಕಾಳನ್ನು ಹಾಗೂ ಪ್ರತಿ ಕ್ವಿಂಟಾಲ್‌ಗೆ ರೂ. 6,000/- ರಂತೆ ಗರಿಷ್ಠ 6,575 ಮೆಟ್ರಿಕ್ ಟನ್ ಎಫ್.ಎ.ಕ್ಯೂ ಗುಣಮಟ್ಟದ ಉದ್ದಿನಕಾಳನ್ನು ಕೇಂದ್ರ ಸರ್ಕಾರದ ಮಾರ್ಗಸೂಚಿಗಳನ್ವಯ ನಾಫೆಡ್ ಸಂಸ್ಥೆ ಹಾಗೂ ಕರ್ನಾಟಕ ರಾಜ್ಯ ಸಹಕಾರ ಮಾರಾಟ ಮಹಾಮಂಡಳ ನಿಯಮಿತ, ಬೆಂಗಳೂರು ಸಂಸ್ಥೆಯ ಮೂಲಕ ಖರೀದಿಸಲು ಖರೀದಿ ಕೇಂದ್ರಗಳನ್ನು ತೆರೆಯಲು ಜಿಲ್ಲಾ ಟಾಸ್ಕ್ ಪೋರ್ಸ್ ಸಮಿತಿಗಳಿಗೆ ಸೂಚಿಸಲಾಗಿರುತ್ತದೆ.<br><br>ಪ್ರತಿ ಎಕರೆಗೆ 4 ಕ್ವಿಂಟಾಲ್ ಗರಿಷ್ಠ ಪ್ರಮಾಣ ಹಾಗೂ ಪ್ರತಿ ರೈತರಿಂದ ಗರಿಷ್ಠ 04 ಕ್ವಿಂಟಾಲ್ ಹೆಸರುಕಾಳು ಹಾಗೂ ಪ್ರತಿ ಎಕರೆಗೆ 4 ಕ್ವಿಂಟಾಲ್ ಗರಿಷ್ಠ ಪ್ರಮಾಣ ಹಾಗೂ ಪ್ರತಿ ರೈತರಿಂದ ಗರಿಷ್ಠ 04 ಕ್ವಿಂಟಾಲ್ ಉದ್ದಿನಕಾಳು ಖರೀದಿಗೆ ಅವಕಾಶ ಕಲ್ಪಿಸಲಾಗಿದೆ. ರೈತ ನೋಂದಣಿ ಕಾರ್ಯದ ಕಾಲಾವಧಿಯನ್ನು ದಿನಾಂಕ: 15/09/2020ರಿಂದ ಅನ್ವಯವಾಗುವಂತೆ 30 ದಿನಗಳವರೆಗೆ ಹಾಗೂ ನೋಂದಣಿ ಕಾರ್ಯದ ಜೊತೆಯಲ್ಲಿಯೇ ಖರೀದಿ ಕಾಲಾವಧಿಯನ್ನು 60 ದಿನಗಳವರೆಗೆ ನಿಗಧಿಪಡಿಸಲಾಗಿದೆ. |
| ಆ | ರೈತರಿಂದ ಖರೀದಿಸಲು ಸರ್ಕಾರ ಎಷ್ಟು ಬೆಲೆಯನ್ನು ನಿಗಧಿಪಡಿಸಲಾಗಿದೆ; ಎಷ್ಟು ಕ್ವಿಂಟಾಲ್ ಧಾನ್ಯವನ್ನು ರೈತರಿಂದ ಖರೀದಿಸಲಾಗಿದೆ; (ವಿವರ ನೀಡುವುದು) | ಕೇಂದ್ರ ಸರ್ಕಾರವು ಎಫ್.ಎ.ಕ್ಯೂ ಗುಣಮಟ್ಟದ ಹೆಸರುಕಾಳು ಉತ್ಪನ್ನಕ್ಕೆ ಪ್ರತಿ ಕ್ವಿಂಟಾಲ್‌ಗೆ ರೂ.7196/- ರಂತೆ ಗರಿಷ್ಠ 21,725 ಮೆಟ್ರಿಕ್ ಟನ್ ಹಾಗೂ ಉದ್ದಿನ ಕಾಳು ಉತ್ಪನ್ನಕ್ಕೆ ಪ್ರತಿ ಕ್ವಿಂಟಾಲ್‌ಗೆ ರೂ.6000/- ರಂತೆ ಗರಿಷ್ಠ 6,575 ಮೆಟ್ರಿಕ್ ಟನ್ ನಿಗಧಿಪಡಿಸಿದ್ದು, ಸದರಿ ದರದಂತೆ ಖರೀದಿಸಲು ರೈತರ ನೋಂದಣಿ ಹಾಗೂ ಖರೀದಿ ಪ್ರಕ್ರಿಯೆಯು ಜೊತೆಯಲ್ಲಿಯೇ ಪ್ರಾರಂಭವಾಗುತ್ತದೆ. |

| | | |
|---|---|---|
| ಇ | ಬೀದರ್ ಜಿಲ್ಲೆಯಲ್ಲಿ ಎಷ್ಟು ಖರೀದಿ ಕೇಂದ್ರಗಳನ್ನು ಸ್ಥಾಪಿಸಲಾಗಿದೆ? (ತಾಲ್ಲೂಕುವಾರು ವಿವರ ನೀಡುವುದು) | ಬೀದರ್ ಜಿಲ್ಲೆಯಲ್ಲಿ ಬೆಂಬಲ ಬೆಲೆ ಯೋಜನೆಯಡಿ ಹೆಸರುಕಾಳು ಹಾಗೂ ಉದ್ದಿನಕಾಳು ಉತ್ಪನ್ನಗಳನ್ನು ಖರೀದಿಸಲು ಒಟ್ಟು 05 ಕೇಂದ್ರಗಳನ್ನು ತೆರೆಯಲಾಗಿದ್ದು, ಈ ಕೆಳಕಂಡಂತಿವೆ. |

| ಕ್ರಸಂ | ತಾಲ್ಲೂಕು | ಖರೀದಿ ಕೇಂದ್ರಗಳ ಒಟ್ಟು ಸಂಖ್ಯೆ |
|---|---|---|
| 1 | ಬೀದರ್ | 8 |
| 2 | ಔರಾದ್ | 15 |
| 3 | ಬಸವಕಲ್ಯಾಣ | 12 |
| 4 | ಭಾಲ್ಕಿ | 15 |
| 5 | ಹುಮ್ನಾಬಾದ್ | 10 |
| | **ಒಟ್ಟು** | **60** |

(ಎಸ್.ಟಿ.ಸೋಮಶೇಖರ್)
ಸಹಕಾರ ಸಚಿವರು

ಸಂಖ್ಯೆ:ಸಿಒ 505 ಎಂಆರ್ಇ 2020